## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 808

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ.ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 23-02-2023

ಉತ್ತರಿಸಬೇಕಾದ ಸಚಿವರು : ಮುಖ್ಯ ಮಂತ್ರಿ

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಶ್ರೀ ಕುಮಾರ ನಾಯಕ್ ವರದಿ ಅನ್ವಯ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ದಿ:01.06.2016 ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ /ಅನುದಾನಿತ ಪ್ರೌಢ ಶಾಲೆಯ ಶಿಕ್ಷಕರುಗಳ ಬೇಡಿಕೆಯನ್ನು ಪರಿಶೀಲಿಸಲು ರಚಿಸಲಾಗಿದ್ದ ಶ್ರೀ ಕುಮಾರ್ ನಾಯಕ್ ಸಮಿತಿಯ ಶಿಫಾರಸ್ಸುಗಳನ್ನು, 2011ರ ಅಧಿಕಾರಿ ವೇತನ ಸಮಿತಿಯು ಒಪ್ಪಿರುವುದಿಲ್ಲ.<br>ಆದುದರಿಂದ, ರಾಜ್ಯ ಸರ್ಕಾರದ ನೀತಿ ನಿರ್ಣಯದಂತೆ, 2016ರ ಜೂನ್ ಮಾಹೆಯಲ್ಲಿ ಸೇವೆಯಲ್ಲಿದ್ದ ಸರ್ಕಾರಿ/ ಅನುದಾನಿತ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ದಿ: 01.06.2016 ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಿ ದಿನಾಂಕ: 15.04.2016ರ ಸರ್ಕಾರಿ ಆದೇಶ ಸಂಖ್ಯೆ: ED 78 SLB 2016ರಲ್ಲಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಪ್ರಸ್ತಾಪಿತ ಆದೇಶವು ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಶಿಕ್ಷಕರುಗಳಿಗೆ ಮಾತ್ರ ಅನ್ವಯಿಸುತ್ತದೆ. |
| (ಆ) | ಸಮಾಜ ಕಲ್ಯಾಣ ಇಲಾಖೆಯ ಅಧೀನದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ/ಅನುದಾನಿತ |

| | | |
|---|---|---|
| | ವಸತಿ ಶಾಲೆಗಳ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಆರ್ಥಿಕ ಇಲಾಖೆ ತಿರಸ್ಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರೌಢ ಶಾಲೆಗಳ ಶಿಕ್ಷಕರ ಮತ್ತು ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರುಗಳ ವೃಂದ ರಚನೆ, ಸೇವಾ ನಿಬಂಧನೆಗಳು, ಕರ್ತವ್ಯ ಮತ್ತು ಜವಾಬ್ದಾರಿ ಮತ್ತು ಇತರೆ ಮಾನದಂಡಗಳು ಪರಸ್ಪರ ಭಿನ್ನವಾಗಿದ್ದು ಒಂದನ್ನೊಂದು ಹೋಲಿಸಲು ಬರುವುದಿಲ್ಲ. |
| (ಇ) | ಆರ್ಥಿಕ ಇಲಾಖೆಯ ವೇತನ ಶ್ರೇಣಿಯಲ್ಲಿಯೇ ಸೇವೆ ಸಲ್ಲಿಸುತ್ತಿರುವ ವಸತಿ ಶಾಲೆಗಳ ಶಿಕ್ಷಕರಿಗೆ ಒಂದು ವೇತನ ಬಡ್ತಿ ನೀಡದಿರುವುದು ಸಹಜ ನ್ಯಾಯದ ಉಲ್ಲಂಘನೆಯಾಗುವುದಿಲ್ಲವೆ; ಈ ತಾರತಮ್ಯ ಸರಿಪಡಿಸಲು ಸರ್ಕಾರ ಕ್ರಮ ವಹಿಸುವುದೇ? (ಸಂಪೂರ್ಣ ಮಾಹಿತಿ ನೀಡುವುದು). | 2018ರ ಪರಿಷ್ಕೃತ ವೇತನ ಶ್ರೇಣಿಗಳ ಜಾರಿಯ ನಂತರದಲ್ಲಿ, ರಾಜ್ಯ ಸರ್ಕಾರದ ನೀತಿ ನಿರ್ಣಯದಂತೆ, ದಿನಾಂಕ: 20.10.2018ರ ಸರ್ಕಾರಿ ಆದೇಶ ಸಂ: ಆಇ 28 ಎಸ್ ಆರ್ ಪಿ 2018ರಲ್ಲಿ ಶಿಕ್ಷಣ ಇಲಾಖೆಯ ಶಿಕ್ಷಕರುಗಳಿಗೆ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಲಾಗಿದ್ದ ದಿನಾಂಕ:15.04.2016ರ ಆದೇಶವನ್ನು ದಿನಾಂಕ:01.11.2018ರಿಂದ ಜಾರಿಗೆ ಬರುವಂತೆ ನಿರಸನಗೊಳಿಸಲಾಗಿರುತ್ತದೆ.<br>ಆದುದರಿಂದ, ಪ್ರಸ್ತುತ ಶಿಕ್ಷಕರುಗಳಿಗೆ ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡಲಾಗಿರುವ ಆದೇಶಗಳು ಅಸ್ತಿತ್ವದಲ್ಲಿರುವುದಿಲ್ಲ. |

ಸಂ: ಆಇ 6 ಎಸ್‌ಆರ್‌ಪಿ 2023

(ಸಿದ್ದರಾಮಯ್ಯ)

(ಮುಖ್ಯಮಂತ್ರಿ)